# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ : ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ರೇವಣಿಗಳು ಮತ್ತು ವಹಿವಾಟುಗಳನ್ನು ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಲ್ಲಿ ತೊಡಗಿಸುವ ಬಗ್ಗೆ.**

ಸರ್ಕಾರದ ಆದೇಶ ಸಂಖ್ಯೆ: ಸಇ 25 ಎಂಆರ್‌ಇ 2015
ಬೆಂಗಳೂರು. ದಿನಾಂಕ:12/02/2015

**ಓದಲಾಗಿದೆ :**
1. **ನಿರ್ದೇಶಕರು, ಕೃಷಿ ಮಾರಾಟ ಇಲಾಖೆ, ಬೆಂಗಳೂರು ಇವರ ಸುತ್ತೋಲೆ ಸಂ.ಕೃಮಾಇ/103/ಮುಂಪ/2007, ದಿನಾಂಕ:05.01.2008**
2. ನಿರ್ದೇಶಕರು, ಕೃಷಿ ಮಾರಾಟ ಇಲಾಖೆ ಇವರ ಪತ್ರ ಸಂ:ಕೃಮಾಇ/ಬೆಂಮುಂಪಿ/ಉಖಾರೇ/6751/2014, ದಿನಾಂಕ:19.01.2015

ಪ್ರಸ್ತಾವನೆ :

ಮೇಲೆ ಓದಲಾದ ಕ್ರ.ಸಂ. (1) ದಿನಾಂಕ:05.01.2008 ರಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ನಿಧಿಯನ್ನು ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಹಾಗೂ ಸಹಕಾರ ಬ್ಯಾಂಕ್‌ಗಳಲ್ಲಿ ತೊಡಗಿಸುವ ಬಗ್ಗೆ ಕೆಲವೊಂದು ಷರತ್ತುಗಳನ್ನು ವಿಧಿಸಿ ರಾಜ್ಯದ ಎಲ್ಲಾ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ಸುತ್ತೋಲೆಯನ್ನು ಹೊರಡಿಸಲಾಗಿದೆ.

ಮೇಲೆ ಓದಲಾದ ಕ್ರ.ಸಂ. (2) ದಿನಾಂಕ:19.01.2015 ರ ಪತ್ರದಲ್ಲಿ ನಿರ್ದೇಶಕರು, ಕೃಷಿ ಮಾರಾಟ ಇಲಾಖೆ ಇವರು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್‌ಗಳು ಪುನಶ್ಚೇತನಗೊಂಡಿದ್ದು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿರುವುದರಿಂದ ಈ ಹಿಂದೆ ಇದ್ದಂತೆ ಕನಿಷ್ಠ 50 ರಷ್ಟು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಬಂಡವಾಳವನ್ನು ನಿಗಧಿತ ಠೇವಣಿ ರೂಪದಲ್ಲಿ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳಲ್ಲಿ ಹೂಡಿಕೆ ಬಗ್ಗೆ ಮತ್ತು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಎಲ್ಲಾ ವ್ಯವಹಾರವನ್ನು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳಲ್ಲಿಯೇ ನಡೆಸುವ ಬಗ್ಗೆ ಸೂಕ್ತ ಕಾನೂನು ತಿದ್ದುಪಡಿಯನ್ನು ತಂದು ಸುತ್ತೋಲೆಯನ್ನು ಜರೂರಾಗಿ ರಾಜ್ಯದ ಎಲ್ಲಾ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳಿಗೆ ನಿರ್ದೇಶನ ನೀಡುವ ಕುರಿತು ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟೆ ಸಚಿವರು ನೀಡಿದ್ದ ಸೂಚನೆ ಅನ್ವಯ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳ ಕಾರ್ಯನಿರ್ವಹಣೆ ಹಾಗೂ ಆರ್ಥಿಕ ಸದೃಢತೆಯ ಬಗ್ಗೆ ಸಹಕಾರ ಸಂಘಗಳ ನಿಬಂಧಕರು ನೀಡುವ ಪ್ರಮಾಣ ಪತ್ರ ಆಧರಿಸಿ ರಾಜ್ಯದಲ್ಲಿನ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಲ್ಲಿ ಲಭ್ಯವಿರುವ ಹೆಚ್ಚುವರಿ ಹಣವನ್ನು ನಿಶ್ಚಿತ ಠೇವಣಿ ರೂಪದಲ್ಲಿ ತೊಡಗಿಸಲು ಮತ್ತು ವಹಿವಾಟು ನಡೆಸಲು ಕ್ರಮ ಕೈಗೊಳ್ಳಬಹುದಾಗಿದೆ. ಮಾರುಕಟ್ಟೆ ಪ್ರಾಂಗಣಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಮಾರುಕಟ್ಟೆ ಸಮಿತಿಗಳು ಸಾಲ ಪಡೆದು ಕಾರ್ಯನಿರ್ವಹಿಸುವ ಸಂದರ್ಭದಲ್ಲಿ ಸಾಲ ಮಂಜೂರಾತಿ ನೀಡಿದ ಬ್ಯಾಂಕಿನಲ್ಲಿ ನಿಶ್ಚಿತ ಠೇವಣಿ ಮತ್ತು ವಹಿವಾಟು ನಡೆಸುವುದು ಸಾಲ ನಿಬಂಧನೆಗಳಿಗೆ ಪೂರಕವಿದ್ದು ಅದರಂತೆ ಕ್ರಮ ವಹಿಸಬಹುದಾಗಿದೆ. ಮಾರುಕಟ್ಟೆ ಪ್ರಾಂಗಣಗಳಲ್ಲಿ ಬ್ಯಾಂಕಿಂಗ್ ವಹಿವಾಟು ನಡೆಸಲು ಡಿ.ಸಿ.ಸಿ ಬ್ಯಾಂಕ್ ಸೇರಿದಂತೆ ರಾಷ್ಟ್ರೀಕೃತ ಬ್ಯಾಂಕ್‌ಗಳಿಗೆ ನಿವೇಶನ/ಕಟ್ಟಡ ಹಂಚಿಕೆ ಮಾಡಿದ್ದು, ಮಾರುಕಟ್ಟೆ ಸಮಿತಿಗಳ ಆರ್ಥಿಕ ವಹಿವಾಟಿಗೆ ಪೂರಕವಾಗಿ ಸ್ಪಂದಿಸುವ ಮತ್ತು ಸೌಲಭ್ಯ ಹೊಂದಿರುವ ಬ್ಯಾಂಕ್‌ಗಳಲ್ಲಿ ವಹಿವಾಟು ನಡೆಸುವುದು ಸೂಕ್ತವಿದ್ದು ಇಂತಹ ಅನುಕೂಲತೆಯನ್ನು ಹೊಂದಿರುವ ಡಿ.ಸಿ.ಸಿ ಬ್ಯಾಂಕ್‌ನಲ್ಲಿ ಆದ್ಯತೆ ಮೇರೆಗೆ ಸಮಿತಿಗಳು ಆರ್ಥಿಕ ವಹಿವಾಟು ನಡೆಸುವುದನ್ನು ಪರಿಶೀಲಿಸಬಹುದಾಗಿದೆ ಎಂದು ವರದಿಯೊಂದಿಗೆ ಪ್ರಸ್ತಾವನೆಯನ್ನು ನಿರ್ದೇಶಕರು ಸರ್ಕಾರಕ್ಕೆ ಸಲ್ಲಿಸಿರುತ್ತಾರೆ.

ನಿರ್ದೇಶಕರ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಠೇವಣಿಗಳನ್ನು ಮತ್ತು ವಹಿವಾಟುಗಳನ್ನು ಆರ್ಥಿಕ ಸದೃಡತೆ ಹೊಂದಿರುವ ಸಹಕಾರಿ ಕ್ಷೇತ್ರದ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ಗಳಲ್ಲಿ ಕೆಲವೊಂದು ಷರತ್ತುಗೊಳಪಡಿಸಿ ವಹಿವಾಟು ನಡೆಸುವ ಬಗ್ಗೆ ತೀರ್ಮಾನಿಸಿದೆ. ಅದರಂತೆ, ಈ ಕೆಳಕಂಡ ಆದೇಶ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳ ಠೇವಣಿಗಳು ಮತ್ತು ವಹಿವಾಟುಗಳನ್ನು ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕುಗಳ ಕಾರ್ಯನಿರ್ವಹಣೆ ಹಾಗೂ ಆರ್ಥಿಕ ಸದೃಡತೆಯ ಬಗ್ಗೆ ಸಹಕಾರ ಸಂಘಗಳ ನಿಬಂಧಕರು ಅಥವಾ CRISIL ಮುಂತಾದ ಸಂಸ್ಥೆಯ ಪ್ರಮಾಣ ಪತ್ರವನ್ನು ಆಧರಿಸಿ ಈ ಕೆಳಕಂಡ ಷರತ್ತುಗೊಳಪಟ್ಟು ಸಹಕಾರಿ ಕ್ಷೇತ್ರದ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಲ್ಲಿ ಠೇವಣಿಗಳನ್ನು ತೊಡಗಿಸಿ ವಹಿವಾಟು ನಡೆಸಲು ಆದೇಶಿಸಿದೆ.

19/2/2015 MCA 18/2/15
CW 22583
18/2

2..

1. ಸಹಕಾರಿ ಸಂಘಗಳು ರಿಜಿಸ್ಟ್ರಾರ್ ಅನುಮೋದಿಸಿದ ಸಹಕಾರಿ ಜಿಲ್ಲಾ ಕೇಂದ್ರ ಬ್ಯಾಂಕಿನಲ್ಲಿ ಶೇ.50ರಷ್ಟು ಹೆಚ್ಚುವರಿ ಹಣ ತೊಡಗಿಸುವುದು.
2. ರಾಷ್ಟ್ರೀಕೃತ ಬ್ಯಾಂಕುಗಳಲ್ಲಿ ಶೇ.50ರಷ್ಟು ಹೆಚ್ಚುವರಿ ಹಣ ತೊಡಗಿಸುವುದು.
3. ಮಾರುಕಟ್ಟೆ ಪ್ರಾಂಗಣಗಳಲ್ಲಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗಾಗಿ ಮಾರುಕಟ್ಟೆ ಸಮಿತಿಗಳು ಸಾಲ ಪಡೆದ ಸಂದರ್ಭದಲ್ಲಿ ಸಾಲ ಮಂಜೂರಾತಿ ನೀಡಿದ ಬ್ಯಾಂಕಿನಲ್ಲಿ ಠೇವಣಿ ತೊಡಗಿಸುವುದು ಮತ್ತು ವಹಿವಾಟು ನಡೆಸುವುದು.
4. ಮಾರುಕಟ್ಟೆ ಪ್ರಾಂಗಣಗಳಲ್ಲಿ ಬ್ಯಾಂಕಿಂಗ್ ವಹಿವಾಟು ನಡೆಸಲು ಡಿ.ಸಿ.ಸಿ. ಬ್ಯಾಂಕ್ ಸೇರಿದಂತೆ ರಾಷ್ಟ್ರೀಕೃತ ಬ್ಯಾಂಕುಗಳಿಗೆ ನಿವೇಶನ/ಕಟ್ಟಡ ಹಂಚಿಕೆ ಮಾಡಿದ್ದು ಮಾರುಕಟ್ಟೆ ಸಮಿತಿಗಳ ಆರ್ಥಿಕ ವಹಿವಾಟಿಗೆ ಪೂರಕವಾಗಿ ಸ್ಪಂದಿಸುವ ಮತ್ತು ಸೌಲಭ್ಯ ಹೊಂದಿರುವ ಬ್ಯಾಂಕುಗಳಲ್ಲಿ ಸಮಿತಿಗಳು ವಹಿವಾಟು ನಡೆಸುವುದು ಇಂತಹ ಸಂದರ್ಭದಲ್ಲಿ ಡಿ.ಸಿ.ಸಿ ಬ್ಯಾಂಕುಗಳಿಗೆ ಆದ್ಯತೆ ಮೇರೆಗೆ ವಹಿವಾಟು ನಡೆಸಲು ಕ್ರಮ ವಹಿಸುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಈ. ಪಾಪಣ್ಣ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಹಕಾರ ಇಲಾಖೆ

ಇವರಿಗೆ :

1) ಮಹಾಲೇಖಪಾಲರು (ಲೆಕ್ಕಪತ್ರ ಮತ್ತು ಹಕ್ಕುಗಳು), ಕರ್ನಾಟಕ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು ಮತ್ತು ಕೃಷಿ ಉತ್ಪನ್ನ ಆಯುಕ್ತರು, ವಿಧಾನಸೌಧ.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ(ವೆಚ್ಚ) ವಿಧಾನಸೌಧ.
4) ನಿರ್ದೇಶಕರು, ಕೃಷಿ ಮಾರಾಟ ಇಲಾಖೆ, ನಂ:16, 2ನೇ ರಾಜಭವನ ರಸ್ತೆ, ಬೆಂಗಳೂರು
5) ಸಹಕಾರ ಸಂಘಗಳ ನಿಬಂಧಕರು, ನಂ.1, ಅಲಿಆಸ್ಕರ್ ರಸ್ತೆ, ಬೆಂಗಳೂರು-52.
6) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ, ಬೆಂಗಳೂರು
7) ಮಾನ್ಯ ತೋಟಗಾರಿಕೆ ಮತ್ತು ಕೃಷಿ ಮಾರುಕಟ್ಟೆ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ.
8) ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಸಹಕಾರ ಇಲಾಖೆ.
9) ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಸಹಕಾರ ಇಲಾಖೆ.
10) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.